ದಿನಾಂಕಃ 22-12-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ,

1) ನಾನು ಅಗ್ನಿಶಾಮಕ ಇಲಾಖೆಯಲ್ಲಿ ಸಮಾರು 14 ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದೇನೆ. ಆರೋಪಿಗೆ ಸಾಲ ನೀಡಿದ ಬಗ್ಗೆ ನಮ್ಮ ಮೇಲಾಧಿಕಾರಿಗಳಿಂದ ಅನುಮತಿ ಪಡೆದುಕೊಂಡಿರುವುದಿಲ್ಲ. ನನಗೆ ಮಾಸಿಕ ವೇತನ ರೂ. 70,000/- ಇರುತ್ತದೆ. ನನ್ನ ವೇತನ ಪ್ರಮಾಣ ಪತ್ರವನ್ನು ಹಾಜರುಪಡಿಸಲು ತೊಂದರೆ ಇರುವುದಿಲ್ಲ.

2) ಆರೋಪಿ ನನಗೆ 2014 ನೇ ಸಾಲಿನಿಂದ ಪರಿಚಯ ಇರುತ್ತಾರೆ. ಆರೋಪಿಯ ಕುಟುಂಬ ಸದಸ್ಯರ ಬಗ್ಗೆ ನನಗೆ ಗೊತ್ತಿರುವುದಿಲ್ಲ. ಆರೋಪಿ ಮೆಕ್ಯಾನಿಕ್ ಆಗಿ ಕೆಲಸ ಮಾಡುತ್ತಾರೆ. ಆರೋಪಿ 10.10.2022 ರಂದು ಹಣ ಬೇಕು ಎಂದು ಕೇಳಿರುತ್ತಾರೆ. ನಾನು 30.10.2022 ರಂದು ಆರೋಪಿಗೆ ಹಣ ನೀಡಿರುತ್ತೇನೆ. ಸದರಿ ವಸ್ತುಸ್ಥಿತಿಯನ್ನು ನಾನು ದೂರಿನಲ್ಲಿ ತಿಳಿಸಿರುತ್ತೇನೆ. ನಾನು ಆರೋಪಿಗೆ ರೂ. 4,50,000/- ಹಣವನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ.

3) ಆರೋಪಿಗೆ ಸೇರಿದ ದ್ವಿಚಕ್ರ ವಾಹನ ನೋಂದಣಿ ಸಂಖ್ಯೆ KA-09-TD-0303 ನನಗೆ ಅಡಮಾನ ಮಾಡಿರುತ್ತಾರೆ ಎಂದರೆ ಸಾಕ್ಷಿಯು ಸದರಿ ವಾಹನವನ್ನು ಖರೀದಿ ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ಸದರಿ ವಾಹನವನ್ನು 2023 ನೇ ಸಾಲಿನಲ್ಲಿ ಖರೀದಿ ಮಾಡಿರುತ್ತೇನೆ. ವಾಹನವನ್ನು ಖರೀದಿ ಮಾಡಿದ ಬಗ್ಗೆ ದಾಖಲೆಯನ್ನಲು ಹಾಜರುಪಡಿಸಲು ತೊಂದರೆ ಇರುವುದಿಲ್ಲ. ವಾಹನ ಅಡಮಾನ ಮಾಡಿದ ಸಮಯದಲ್ಲಿ ಆರೋಪಿಗೆ ಸೇರಿದ ಚೆಕ್ಕನ್ನು ನನಗೆ ನೀಡಿದ್ದರು ಎಂದರೆ ಸರಿಯಲ್ಲ. ನನ್ನ

ಮೊಬೈಲ್ ಸಂಖ್ಯೆ 9900478349 ಆಗಿರುತ್ತದೆ. ಸದರಿ ಸಂಖ್ಯೆಯಿಂದ ನಾನು ಆನ್ ಲೈನ್ ವ್ಯವಹಾರ ಮಾಡುತ್ತೇನೆ ಎಂದರೆ ಸರಿ. ಆರೋಪಿ ಖಾತೆಯಿಂದ ನನ್ನ ಖಾತೆಗೆ ಸುಮಾರು 4 ಲಕ್ಷಕ್ಕೂ ಮೇಲ್ಪಟ್ಟು ಹಣ ವರ್ಗಾವಣೆ ಆಗಿರುತ್ತದೆ ಎಂದರೆ ನನ್ನ ಖಾತೆಯಿಂದ ಆರೋಪಿ ಖಾತೆಗೂ ವರ್ಗಾವಣೆ ಆಗಿರುತ್ತದೆ ಎಂದು ನುಡಿಯುತ್ತಾರೆ.

**<u>ಪಾಟೀ ಸವಾಲುಃ</u>** ಆರೋಪಿ ಪರ ವಕೀಲರು ಪಾಟೀ ಸವಾಲು ವಿಚಾರಣೆಗೆ ಕಾಲಾವಕಾಶ ಕೋರಿದ್ದು ಸಮಯ ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ